# ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 18-03-2021 ಪ್ರಶ್ನೆ ಸಂಖ್ಯೆ : 1343(1626)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎಂ. ನಾರಾಯಣಸ್ವಾಮಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 18-03-2021

ಉತ್ತರಿಸುವ ಸಚಿವರು: ಮಾನ್ಯ ಮುಖ್ಯಮಂತ್ರಿಗಳು

ವಿಷಯ : 2019ರ ವಿವಿಧ ಹುದ್ದೆಗಳ ನೇಮಕಾತಿಯ ಬಗ್ಗೆ

(ಅ) ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ (ಕೆ.ಪಿ.ಟಿ.ಸಿ.ಎಲ್) ಮಂಡಳಿಯು 2019ರಲ್ಲಿ ಖಾಲಿಯಿದ್ದ AED, AE, JE, JPA, JA ಸೇರಿದಂತೆ ಒಟ್ಟು 3646 ಹುದ್ದೆಗಳಿಗೆ ಅಧಿಸೂಚನೆ ಹೊರಡಿಸಿ 2 ವರ್ಷಗಳೇ ಕಳೆದರೂ ನೇಮಕಾತಿ ಪ್ರಕ್ರಿಯೆ ನಡೆಸದಿರಲು ಕಾರಣವೇನು;

(ಆ) ಪ್ರಸ್ತುತ ಈ ನೇಮಕಾತಿಯ ಹಂತದ ಬಗ್ಗೆ ಅಭ್ಯರ್ಥಿಗಳಿಗೆ ಮಾಹಿತಿಯನ್ನು ನೀಡಲಾಗಿದೆಯೇ; ನೀಡಿದ್ದಲ್ಲಿ, ಯಾವಾಗ ಮಾಹಿತಿ ನೀಡಲಾಗಿದೆ;

(ಇ) ಈ ಹುದ್ದೆಗಳಿಗೆ ರಾಜ್ಯದಲ್ಲಿ ಒಟ್ಟು ಎಷ್ಟು ಜನ ಅಭ್ಯರ್ಥಿಗಳು ಅರ್ಜಿಯನ್ನು ಸಲ್ಲಿಸಿದ್ದಾರೆ; (ವಿವರ ನೀಡುವುದು)

(ಈ) ಈ ಅರ್ಜಿ ಸಲ್ಲಿಕೆಗಳಿಂದ ಕೆ.ಪಿ.ಟಿ.ಸಿ.ಎಲ್ ಗೆ ಸಂಗ್ರಹವಾದ ಒಟ್ಟು ಅರ್ಜಿಯ ಶುಲ್ಕದ ಮೊತ್ತವೆಷ್ಟು; (ಸಂಪೂರ್ಣ ಮಾಹಿತಿ ನೀಡುವುದು)

(ಉ) ಒಂದು ವೇಳೆ ಅಧಿಸೂಚನೆ ರದ್ದಾಗಿದ್ದರೆ, ಅರ್ಜಿ ಸಲ್ಲಿಸಿದ (ಶುಲ್ಕ ಭರಿಸಿದ) ಅರ್ಜಿದಾರರಿಗೆ ಶುಲ್ಕ ಹಿಂದಿರುಗಿಸಲಾಗಿದೆಯೇ?